**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ದಾವಣಗೆರೆ.**

**SC.125/2020**

| | | |
|---|---|---|
| ಸಾಕ್ಷಿದಾರರ ಹೆಸರು | : | ಭೀಮಾನಾಯ್ಕ ಕೆ. ಜಿ. |
| ತಂದೆಯ ಹೆಸರು | : | ಹೇಮಲಾನಾಯ್ಕ |
| ವಯಸ್ಸು | : | 62 ವರ್ಷ |
| ಉದ್ಯೋಗ | : | ನಿವೃತ್ತ AEE |
| ವಾಸ ಸ್ಥಳ | : | ಶಿವಮೊಗ್ಗ |

ಪಿ.ಡಬ್ಲ್ಯೂ 4

ಸಿ.ಡಬ್ಲ್ಯೂ 18

ದಿ: 24-04-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ (ಸತೀಶ್ ಕೆ.ಎಸ್.)**:

1. 2017 ರಿಂದ 2020 ರವರೆಗೆ ನಾನು ಹೊನ್ನಾಳಿ ಉಪವಿಭಾಗದ ಲೋಕೋಪಯೋಗಿಯ ಸಹಾಯಕ ಇಂಜಿಯರ್ ಆಗಿ ಕಾರ್ಯ ನಿರ್ವಹಿಸಿದ್ದೇನೆ. ದಿಃ 05-11-2018 ರಂದು ನ್ಯಾಮತಿ ಪೊಲೀಸ್ ಠಾಣೆಯವರು ಈ ಪ್ರಕರಣದ ಕೃತ್ಯ ನಡೆದ ಸ್ಥಳದ ನಕಾಶೆಯನ್ನು ತಯಾರಿಸಿ ಕೊಡಲು ಮನವಿ ಪತ್ರ ಸಲ್ಲಿಸಿದ್ದರು. ದಿಃ 11-12-2018 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಕರಡು ನಕಾಶೆಯನ್ನು ತಯಾರಿಸಿರುತ್ತೇನೆ. ಆ ಕರಡು ನಕಾಶೆಯನ್ನು ಈಗ ನೋಡಿ ಅದರಲ್ಲಿರುವ ನನ್ನ ಸಹಿ ಗುರುತಿಸುತ್ತೇನೆ. ಕರಡು ನಕಾಶೆಯನ್ನು ನಿಪಿ-8 ಅಂತ, ಸಾಕ್ಷಿ ಸಹಿಯನ್ನು ನಿಪಿ-8(ಎ) ಅಂತ

ಗುರುತಿಸಲಾಯಿತು. ಕರಡು ನಕಾಶೆಯನ್ನು ನ್ಯಾಮತಿ ಪೊಲೀಸ್ ಠಾಣೆಗೆ ದಿಃ 15-12-2018 ರಂದು ಕವಚ ಪತ್ರದೊಂದಿಗೆ ಕಳುಹಿಸಿಕೊಟ್ಟಿದ್ದೇನೆ. ಅದನ್ನು ನಿಪಿ-9 ಅಂತ ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ವಿ.ಟಿ., ವಕೀಲರಿಂದ ಆರೋಪಿತರ ಪರವಾಗಿ**:

2. ಕೃತ್ಯ ನಡೆದ ಸ್ಥಳವನ್ನು ಚಾಸಾ-23 ರವರು ತೋರಿಸಿದರು. ನಾನು ಸ್ಥಳಕ್ಕೆ ಹೋಗಿಲ್ಲ, ಪೊಲೀಸ್ ಠಾಣೆಯಲ್ಲಿ ನಕಾಶೆಯನ್ನು ತಯಾರಿಸಿ ಕೊಟ್ಟಿರುತ್ತೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓದಿ, ಹೇಳಿ, ಕೇಳಿ, ಸರಿ ಇದೆ.

Sd/-

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.